# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ಡಿ.ಆರ್.ಚೌಗಲೆ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕರಡಿಗುಡ್ಡಿ ಗ್ರಾಮ ಪಂಚಾಯತಿ, ಬೆಳಗಾವಿ ತಾಲ್ಲೂಕು ಮತ್ತು ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಕುರಿತು.

ಓದಲಾಗಿದೆ:

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಅ.ಸ.ಪ.ಸಂ. Compt/UPLOK/BGM-8843/2016/PP, ದಿನಾಂಕ: 07.09.2018

ಪ್ರಸ್ತಾವನೆ:

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ದಿನಾಂಕ: 28.08.2018ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಗುರುವಿನಹಳ್ಳಿ ಗ್ರಾಮದ ನಿವಾಸಿಯಾದ ಶ್ರೀ ಅಜಿತ್ ಪಾಟೀಲ್, ಬೆಳಗಾವಿ (ಇನ್ನು ಮುಂದೆ 'ದೂರುದಾರರು' ಎಂದು ಕರೆಯಲ್ಪಡುತ್ತಾರೆ) ಇವರು 2015-16ನೇ ಸಾಲಿನಲ್ಲಿ ಕರಡಿಗುಡ್ಡಿ ಗ್ರಾಮ ಪಂಚಾಯತಿಯಲ್ಲಿ ಸುಳ್ಳು ದಾಖಲೆ ಸೃಷ್ಟಿಸುವ ಮೂಲಕ ಸ್ವಚ್ಛ ಭಾರತ ಅಭಿಯಾನ ಯೋಜನೆಯ ಅನುದಾನ ದುರುಪಯೋಗ ಮಾಡಿಕೊಂಡಿರುವ ಹಿನ್ನೆಲೆಯಲ್ಲಿ ಶ್ರೀ ಶಿವಾಜಿ ರಾಮಪ್ಪ ಕುರಿ, ಅಧ್ಯಕ್ಷರು ಮತ್ತು ಶ್ರೀ ಡಿ.ಆರ್.ಚೌಗಲೆ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕರಡಿಗುಡ್ಡಿ ಗ್ರಾಮ ಪಂಚಾಯತಿ, ಬೆಳಗಾವಿ ತಾಲ್ಲೂಕು ಮತ್ತು ಜಿಲ್ಲೆ (ಇನ್ನು ಮುಂದೆ 'ಎದುದಾರರು 1 ಮತ್ತು ಎದುರುದಾರರು 2' ಎಂದು ಕ್ರಮವಾಗಿ ಕರೆಯಲ್ಪಡುತ್ತಾರೆ) ಇವರುಗಳ ವಿರುದ್ಧ ಲೋಕಾಯುಕ್ತ ಸಂಸ್ಥೆಗೆ ದೂರು ನೀಡಿರುತ್ತಾರೆ.

ಈ ದೂರನ್ನು ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 9 ರ ಅಡಿಯಲ್ಲಿ ತನಿಖೆಗೆ ತೆಗೆದುಕೊಂಡಿದ್ದು, ಕಡತ ಮತ್ತು ದಾಖಲಾತಿಗಳನ್ನು ಕೂಲಂಕುಷವಾಗಿ ಪರಿಶೀಲಿಸಲಾಗಿ 30 ಫಲಾನುಭವಿಗಳಿಗೆ ಒಂದೇ ಶೌಚಾಲಯ ಕಾಮಗಾರಿಯ ಛಾಯಾಚಿತ್ರಗಳನ್ನು ಬಳಸುವ ಮೂಲಕ ಹಾಗೂ ಸದರಿ ಕಾಮಗಾರಿಗಳ ಮೊದಲ ಮತ್ತು ಕೊನೆಯ ತನಿಖಾ ದಿನಗಳು 2-3 ದಿನಗಳ ಅಂತರದಲ್ಲಿ ಇದ್ದು ಒಂದೇ ದಿನಾಂಕವನ್ನು ನಮೂದಿಸಿ ಹಣ ದುರುಪಯೋಗಪಡಿಸಿಕೊಂಡಿರುವುದು ಕಂಡುಬಂದಿರುವ ಹಿನ್ನೆಲೆಯಲ್ಲಿ ಕಡತದಲ್ಲಿನ ಸಂಗತಿಗಳು ಹಾಗೂ ದಾಖಲಾತಿಗಳಿಂದ ಎದುರುದಾರರು ಸರ್ಕಾರಿ/ ಸಾರ್ವಜನಿಕ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠತೆ ಮತ್ತು ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ದುರ್ವರ್ತನೆ/ ದುರ್ನಡತೆ ಎಸಗಿರುವುದು ಮೇಲ್ನೋಟಕ್ಕೆ ಕಂಡುಬಂದಿರುವ ಹಿನ್ನೆಲೆಯಲ್ಲಿ ಎದುರುದಾರರು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966ರ ನಿಯಮ 3(1) ರನ್ವಯ ಎದುರುದಾರರು ಶಿಸ್ತು ಕ್ರಮಕ್ಕೆ ಬಾಧ್ಯರಾಗಿರುತ್ತಾರೆಂದು ಕಂಡು ಬರುವುದರಿಂದ, ಎದುರುದಾರರಾದ ಶ್ರೀ ಡಿ.ಆರ್.ಚೌಗಲೆ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕರಡಿಗುಡ್ಡಿ ಗ್ರಾಮ ಪಂಚಾಯತಿ, ಬೆಳಗಾವಿ ತಾಲ್ಲೂಕು ಮತ್ತು ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14-ಎ ರಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ಹಾಗೂ ಅಧ್ಯಕ್ಷರಾದ ಶ್ರೀ ಶಿವಾಜಿ ರಾಮಪ್ಪ ಕುರಿ ಇವರ ವಿರುದ್ಧ ಸೂಕ್ತ ಕ್ರಮ ತೆಗೆದುಕೊಳ್ಳಲು ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ, ಶ್ರೀ ಡಿ.ಆರ್.ಚೌಗಲೆ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕರಡಿಗುಡ್ಡಿ ಗ್ರಾಮ ಪಂಚಾಯತಿ, ಬೆಳಗಾವಿ ತಾಲ್ಲೂಕು ಮತ್ತು ಜಿಲ್ಲೆ ವಿರುದ್ಧ ಇಲಾಖಾ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14–ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 440 ಗ್ರಾಪಂಕಾ 2018 ಬೆಂಗಳೂರು, ದಿನಾಂಕ: 12.10.2018**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ.ಡಿ.ಆರ್.ಚೌಗಲೆ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕರಡಿಗುಡ್ಡಿ ಗ್ರಾಮ ಪಂಚಾಯತಿ, ಬೆಳಗಾವಿ ತಾಲ್ಲೂಕು ಮತ್ತು ಜಿಲ್ಲೆ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 11 ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಗಳ ನಿಯಮ 14–ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿ ಆದೇಶಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ–8ರಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

12/10

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತ–1 ರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಬೆಳಗಾವಿ ಜಿಲ್ಲಾ ಪಂಚಾಯತಿ, ಬೆಳಗಾವಿ.
5) ಕಾರ್ಯನಿರ್ವಾಹಕ ಅಧಿಕಾರಿ, ಬೆಳಗಾವಿ ತಾಲ್ಲೂಕು ಪಂಚಾಯತಿ, ಬೆಳಗಾವಿ
(ಸದರಿ ನೌಕರರಿಗೆ ಈ ಆದೇಶದ ಪ್ರತಿಯನ್ನು ತಲುಪಿಸಿ, ಸರ್ಕಾರಕ್ಕೆ ಸ್ವೀಕೃತಿ ಸಲ್ಲಿಸುವುದು.)
6) ಶ್ರೀ ಡಿ.ಆರ್.ಚೌಗಲೆ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕರಡಿಗುಡ್ಡಿ ಗ್ರಾಮ ಪಂಚಾಯತಿ, ಬೆಳಗಾವಿ ತಾಲ್ಲೂಕು ಮತ್ತು ಜಿಲ್ಲೆ.
7) ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
8) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.